ಮುಂದಿನ ಅಧಿವೇಶನದಲ್ಲಿ ಈ ಬಗ್ಗೆ ಚರ್ಚಿಸಿ ತೀರ್ಮಾನ | ಗ್ರಾ.ಪಂ, ಜಿ.ಪಂ ಸಾಕು ಎನ್ನುವ ಮಾತುಗಳು ಕೇಳಿಬಂದಿದೆ | ಈ ಬಗ್ಗೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು

# ತಾ.ಪಂ. ರದ್ಧತಿ ಬಗ್ಗೆ ಅಧಿವೇಶನದಲ್ಲಿ ಚರ್ಚೆ: ಈಶ್ವರಪ್ಪ

17/2/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಅವಧಿ ಮುಗಿದಿರುವ ತಾಲೂಕು ಪಂಚಾಯಿತಿ ಚುನಾವಣೆಯ ನಿರೀಕ್ಷೆಯಲ್ಲಿರುವ ಆಕಾಂಕ್ಷಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್ ಈಶ್ವರಪ್ಪ ಶಾಕ್ ನೀಡಿದ್ದಾರೆ.

ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಗ್ರಾಮ ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಸಾಕು ಎನ್ನುವ ಅಭಿಪ್ರಾಯಗಳು ಕೇಳಿಬಂದಿದೆ. ತಾಲೂಕು ಪಂಚಾಯಿತಿಯ ಅಗತ್ಯವಿಲ್ಲ ಎನ್ನುವ ಮಾತುಗಳು ಇತ್ತೀಚಿಗೆ ಕೇಳಿಬಂದಿದೆ. ಆದ್ದರಿಂದ ತಾಲೂಕು ಪಂಚಾಯಿತಿ ಇರಬೇಕೋ ಬೇಡವೋ ಎನ್ನುವ ಬಗ್ಗೆ ಅಧಿವೇಶನದಲ್ಲಿ ಸುಧೀರ್ಘವಾಗಿ ಚರ್ಚಿಸಿ ನಿರ್ಣಯಿಸಲಾಗುವುದು ಎಂದರು.

ಗ್ರಾಮ ಪಂಚಾಯಿತಿಗೆ ನೂತನವಾಗಿ ಆಯ್ಕೆಯಾಗಿರುವ ಸದಸ್ಯರಿಗೆ ಆಯೋಜಿಸಿದ್ದ 'ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮ'ವನ್ನು ಮಂಗಳವಾರ ವಿಡಿಯೊ ಕಾನ್ಫರೆನ್ಸ್ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ತಾಲ್ಲೂಕು ಪಂಚಾಯಿತಿ ರದ್ದತಿ ಬಗ್ಗೆ ಮುಂದಿನ ಅಧಿವೇಶನದಲ್ಲಿ ಚರ್ಚೆ ಮಾಡಿ ನಿರ್ಣಯ ಕೈಗೊಳ್ಳಲಾಗುವುದು. ತಾಲೂಕು ಪಂಚಾಯಿತಿ ಉಪಯೋಗವಿಲ್ಲ ಎಂಬ ಅಭಿಪ್ರಾಯ ಎಲ್ಲರಲ್ಲೂ ವ್ಯಕ್ತವಾಗುತ್ತಿದೆ. ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಗ್ರಾ.ಪಂ ಮತ್ತು ಜಿ.ಪಂ ಎರಡೇ ಸಾಕು ಎಂಬ ಅಭಿಪ್ರಾಯವಿದೆ. ಆದರೆ ಅಭಿಪ್ರಾಯ ಬಂದ ಕೂಡಲೇ ರದ್ದು ಮಾಡುವುದಕ್ಕೆ ಸಾಧ್ಯವಿಲ್ಲ. ಇದು ಜಾರಿಯಾಗಲು ಸಾಂವಿಧಾನಿಕ ತಿದ್ದುಪಡಿಯಾಗಬೇಕು ಎಂದರು.



ಗ್ರಾಮ ಪಂಚಾಯಿತಿಗೆ ನೂತನವಾಗಿ ಆಯ್ಕೆಯಾಗಿರುವ ಸದಸ್ಯರಿಗೆ ಆಯೋಜಿಸಿದ್ದ 'ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮ'ವನ್ನು ಸಚಿವ ಕೆ.ಎಸ್ ಈಶ್ವರಪ್ಪ ಅವರು ಮಂಗಳವಾರ ವಿಡಿಯೊ ಕಾನ್ಫರೆನ್ಸ್ ಮೂಲಕ ಉದ್ಘಾಟಿಸಿದರು. ಈ ವೇಳೆ ಗ್ರಾಮೀಣಾಭಿವೃದ್ಧಿ ಹಾಗೂ ಗ್ರಾಮಪಂಚಾಯತ್‌ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ ಎಲ್.ಕೆ ಅತೀಕ್, ಉಮಾಮಹಾದೇವನ್, ಇಲಾಖೆಯ ಹಿರಿಯ ಅಧಿಕಾರಿ ಶಿಲ್ಪಾನಾಯಕ್, ನರೇಗಾ ಆಯುಕ್ತ ಅನಿರುದ್ಧ ಶ್ರವಣ ಉಪಸ್ಥಿತರಿದ್ದರು.

ತಾಲೂಕು ಪಂಚಾಯಿತಿಗಳನ್ನು ರದ್ದುಪಡಿಸುವ ವಿಷಯಕ್ಕೆ ಸಂಬಂಧಿಸಿದಂತೆ ವಿಧಾನಮಂಡಲ ಅಧಿವೇಶನದಲ್ಲಿ ಚರ್ಚಿಸಿ, ನಿರ್ಣಯ ಕೈಗೊಳ್ಳಬೇಕು. ಬಳಿಕ ಅದನ್ನು ಕೇಂದ್ರ ಸರಕಾರಕ್ಕೆ ರವಾನಿಸಬೇಕು. ಇದಾದ ಬಳಿಕ ಕೇಂದ್ರ ಸರಕಾರ ಎಲ್ಲ ರಾಜ್ಯಗಳ ಅಭಿಪ್ರಾಯ ಪಡೆದು ಅಂತಿಮ ನಿರ್ಧಾರ ಕೈಗೊಳ್ಳುತ್ತದೆ ಎಂದು ಹೇಳಿದರು.

> ಕರೋನಾ ಸಂಕಷ್ಟ ಸಮಯದಲ್ಲೂ ಗ್ರಾಮ ಪಂಚಾಯಿತಿಗಳು ಕಾರ್ಯಪಡೆಯ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವ ನೆರವು ನೀಡುವ ಕಾರ್ಯಕ್ರಮವನ್ನು ನಡೆಸಿವೆ. ಲಾಕ್ ಡೌನ್ ಅವಧಿಯಲ್ಲಿ ವಲಸಿಗರಿಗೆ ಉದ್ಯೋಗ ಕಲ್ಪಿಸಿಕೊಟ್ಟು ಎಲ್ಲ ರೀತಿಯಲ್ಲೂ ನೆರವಾಗಿವೆ.
>
> **- ಕೆ.ಎಸ್ ಈಶ್ವರಪ್ಪ** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವ

**ದೂರದೃಷ್ಟಿ ಯೋಜನೆಗೆ ಕ್ರಮ:** ಇನ್ನು ರಾಜ್ಯದಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಗ್ರಾಮ ಪಂಚಾಯಿತಿಗಳಲ್ಲಿ ಜನರ ಯೋಜನೆ ಎಂಬ ಹೆಸರಿನಲ್ಲಿ ದೂರದೃಷ್ಟಿ ಯೋಜನೆಗಳನ್ನು ತಯಾರಿಸಲು ಸರಕಾರ ಮುಂದಾಗಿದೆ. ಪಂಚಾಯತ್ ಗ್ರಂಥಾಲಯಗಳಲ್ಲಿ ಜ್ಞಾನಾರ್ಜನೆಗೆ ಓದುವ ಬೆಳಕು ಕಾರ್ಯಕ್ರಮದ ಜತೆಗೆ ಮಾಹಿತಿ ಕೇಂದ್ರಗಳನ್ನೂ ತೆರೆಯಲು ಉದ್ದೇಶಿಸಲಾಗಿದೆ ಎಂದರು.

ಮಹಾತ್ಮ ಗಾಂಧೀಜಿ ಅವರು ಪ್ರತಿಪಾದಿಸಿದ ಗ್ರಾಮ ಸ್ವರಾಜ್ ಕಲ್ಪನೆಯಿಂದ ಈ ವ್ಯವಸ್ಥೆಗೆ ಹೆಚ್ಚಿನ ಮಹತ್ವ ಸಿಕ್ಕಿದೆ. ಕೇಂದ್ರ ಹಾಗೂ ರಾಜ್ಯ ಸರಕಾರಗಳು ಗ್ರಾಮ ಸ್ವರಾಜ್ ವ್ಯವಸ್ಥೆಯಲ್ಲಿ ನಂಬಿಕೆ ಇರಿಸಿಕೊಂಡು ನಿರಂತರವಾಗಿ ಈ ವ್ಯವಸ್ಥೆಗೆ ಸಾಂಸ್ಥಿಕ ಬಲ ನೀಡುತ್ತ ಬಂದಿವೆ ಎಂದರು.

## ಚುನಾವಣೆ ಆಗೇ ಆಗುತ್ತೆ

**ತಾಲೂಕು ಪಂಚಾಯಿತಿ ಇರಬೇಕೇ ಬೇಡವೇ ಎನ್ನುವ ಬಗ್ಗೆ ಚರ್ಚೆಯಾಗಿ ಬಳಿಕ ಇದು ನಿರ್ಧಾರವಾಗಲಿದೆ. ಆದರೆ ಈಗ ಅವಧಿ ಮುಗಿದಿರುವ ತಾಪಂ ಹಾಗೂ ಜಿಪಂಗಳಿಗೆ ಚುನಾವಣೆ ಆಗೇ ಆಗುತ್ತದೆ. ಆದ್ದರಿಂದ ಅವಧಿ ಮುಗಿದಿರುವ ತಾಲೂಕು ಪಂಚಾಯಿತಿ, ಜಿಲ್ಲಾಪಂಚಾಯಿತಿಗಳಿಗೆ ಏಪ್ರಿಲ್‌ನಲ್ಲಿ ಚುನಾವಣೆ ಆಗಬಹುದು. ತಾಲೂಕು ಪಂಚಾಯಿತಿ ರದ್ದತಿಗೂ ಚುನಾವಣೆಗೂ ಸಂಬಂಧವಿಲ್ಲ ಎಂದು ಈಶ್ವರಪ್ಪ ಸ್ಪಷ್ಟಪಡಿಸಿದರು.**

ರಾಜ್ಯದ 6,600 ಗ್ರಾ.ಪಂ.ಗಳಲ್ಲಿ ಎಲ್ಲ ಸದಸ್ಯರು ಹಾಗೂ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಗಳಲ್ಲಿ ಅರ್ಧದಷ್ಟು ಸಂಖ್ಯೆಯಲ್ಲಿ ಮಹಿಳೆ ಯರು ಪ್ರಾತಿನಿಧ್ಯ ಪಡೆದಿರುವುದು ವಿಶೇಷವಾ ಗಿದೆ. ಮಹಿಳೆಯರು ಆಡಳಿತ ವ್ಯವಸ್ಥೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಪಂಚಾಯತ್‌ರಾಜ್ ವ್ಯವಸ್ಥೆಗೆ ಹೆಚ್ಚಿನ ಅರ್ಥ ತುಂಬಲಿ ಎಂದು ಅವರು ಹೇಳಿದರು. ಈ ವೇಳೆ ಗ್ರಾಮೀಣಾಭಿವೃದ್ಧಿ ಹಾಗೂ ಗ್ರಾಮ ಪಂಚಾಯತ್ ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ ಎಲ್.ಕೆ ಅತೀಕ್, ಉಮಾಮಹಾ ದೇವನ್, ಇಲಾಖೆಯ ಹಿರಿಯ ಅಧಿಕಾರಿ ಶಿಲ್ಪಾ ನಾಯಕ್, ನರೇಗಾ ಆಯುಕ್ತ ಅನಿರುದ್ಧ ಶ್ರವಣ ಉಪಸ್ಥಿತರಿದ್ದರು.